ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೌದು. ಸೂಕ್ತ ನಿವೇಶನವನ್ನು ಆರಿಸಲು ಪ್ರಯತ್ನಿಸಲಾಗುತ್ತಿದೆ.

ಆ) ನಿವೇಶನ ದೊರೆತ ಕೂಡಲೇ. ಕಟ್ಟಡದ ಕೆಲಸ ಪ್ರಾರಂಭಿಸಲು, ಕ್ರಮ ಕೈಗೊಳ್ಳಲಾಗುವುದು.

ಶಹಾಪುರ ನ್ಯಾಯಾಲಯ ಕಟ್ಟಡ ನಿರ್ಮಾಣ.

1786. ಶ್ರೀ ಶಿವಶೇಖರಪ್ಪಗೌಡ ಶಿರ್ನಾಳ (ಶಹಾಪುರ್) : ಮಾನ್ಯ ಕಾನೂನು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಹಾಪುರದಲ್ಲಿ ನ್ಯಾಯಾಲಯ ಇರುವುದು ನಿಜವಲ್ಲವೆ ;

ಆ) ಹಾಗಿದ್ದಲ್ಲಿ, ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದವರಿಗೆ ಗೊತ್ತಿದೆಯೇ ;

ಇ) ಸ್ವಂತ ಕಟ್ಟಡಕ್ಕಾಗಿ ಜಾಗವನ್ನು ಸ್ವಾಧೀನಪಡಿಸಿಕೊಳ್ಳುವ ಸಂಬಂಧದಲ್ಲಿ ಎಲ್ಲಾ ಕಾರ್ಯಕ್ರಮಗಳು ಪೂರ್ತಿಯಾಗಿದ್ದು ಜಮೀನಿನ ಮಾಲೀಕರಿಗೆ ಹಣವನ್ನು ಕೊಡುವ ಸಲುವಾಗಿ ಸರ್ಕಾರವು ಬಿಡುಗಡೆ ಮಾಡದಿರುವುದಕ್ಕೆ ಕಾರಣವೇನು ;

ಈ) ಸರ್ಕಾರದವರು ಈಗಲಾದರೂ ಹಣ ಬಿಡುಗಡೆ ಮಾಡಿ ಕಟ್ಟಡ ನಿರ್ಮಾಣ ಕಾರ್ಯವನ್ನು ತ್ವರಿತಗೊಳಿಸುವರೆ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾನೂನು ಸಚಿವರು) :

ಅ) ಹೌದು.

ಆ) ಹೌದು.

ಇ) ಈ ವರ್ಷದ 1991-92ರ ಆಯವ್ಯಯದಲ್ಲಿ ಹಣ ದೊರೆಯದೆ ಇರುವುದರಿಂದ ಜಮೀನಿನ ಮಾಲೀಕರಿಗೆ ಭೂ ಸ್ವಾಧೀನದ ಹಣವನ್ನು ಬಿಡುಗಡೆ ಮಾಡಿರುವುದಿಲ್ಲ.

ಈ) ಇದನ್ನು ಪರಿಶೀಲಿಸಲಾಗುತ್ತಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿನ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಬಗ್ಗೆ.

1790. ಶ್ರೀ ಎಸ್.ಜಿ. ನಾಯಕ್ (ಮೊಳಕಾಲ್ಮೂರು) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿತ್ರದುರ್ಗ ಜಿಲ್ಲೆಯಲ್ಲಿನ ಪದವಿಪೂರ್ವ ಕಾಲೇಜುಗಳಲ್ಲಿ, ಪ್ರಥಮ ದರ್ಜೆ ಕಾಲೇಜು, ಪ್ರೌಢ ಶಾಲೆ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ :

ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?